ದಿನಾಂಕಃ 14-03-2019

ದಿಃ14-03-2019 ರ ಮಧ್ಯಂತರ ಅರ್ಜಿಯ ಅದೇಶದ ಮೇರೆಗೆ ಸಾಕ್ಷಿಯನ್ನು ಇಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆ ಪ್ರತಿವಾದಿ ಪರ ವಕೀಲರಿಂದಃ

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿರುವ ಸಂಗತಿಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯವಾಗಿವೆ.

ದಿಃ25/06/1974 ರ ಕ್ರಯ ಪತ್ರದ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ ಸದರಿ ದಾಖಲೆಯನ್ನು ನಿಶಾನೆ ಡಿ 1 ಎಂದು ಗುರುತಿಸಲಾಯಿತು. ದಿಃ19/09/2001 ರ ನೊಂದಾಯಿತ ಮೂಲ ವಿಭಾಗ ಪತ್ರವನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಶಾನೆ ಡಿ 2 ಎಂದು ಗುರುತಿಸಲಾಯಿತು. ಪ್ರಮಾಣಪತ್ರ ಹಾಗೂ ವಂಶವೃಕ್ಷದ ದೃಡೀಕೃತ ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಗಳನ್ನು ಕ್ರಮವಾಗಿ ನಿಶಾನೆ ಡಿ 3 ಮತ್ತು 4 ಎಂದು ಗುರುತಿಸಲಾಯಿತು. ಓಎಸ್ 255/2011 ರ ವಾದ ಪತ್ರದ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಶಾನೆ ಡಿ 5 ಎಂದು ಗುರುತಿಸಲಾಯಿತು. ದಿಃ29/12/2009 ರ ಕ್ರಯಪತ್ರದ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ ಸದರಿ ದಾಖಲೆಯನ್ನು ನಿಶಾನೆ ಡಿ 6 ಎಂದು ಗುರುತಿಸಲಾಯಿತು. 1991-92 ರ ಅಸೆಸ್ ಮೆಂಟ್ ಲಿಸ್ಟ್ ನ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಶಾನೆ ಡಿ 7 ಎಂದು ಗುರುತಿಸಲಾಯಿತು.

ಪಾಟೀಸವಾಲು ವಾದಿ ಪರ ವಕೀಲರಿಂದಃ

ಪಾಟೀಸವಾಲಿಗೆ ವಕೀಲರು ಕಾಲಾವಕಾಶ ಕೋರಿದ್ದರಿಂದ ಪಾಟೀಸವಾಲಿಗೆ ಕಾಲಾವಕಾಶ ನೀಡಲಾಯಿತು.

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಪಡಿಸಲಾಯಿತು.)

**ಓ.ಹೇ.ಕೇ. ಸರಿ ಇದೆ.**

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ

ಚನ್ನಗಿರಿ